# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 38
ಸದಸ್ಯರ ಹೆಸರು : ಶ್ರೀ. ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ : 04/07/2023
ಉತ್ತರಿಸುವ ಸಚಿವರು : ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ | ಕಳೆದ ಮೂರು ವರ್ಷಗಳಲ್ಲಿ ಬಾಗಲಕೋಟೆ, ವಿಜಯಪುರ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಎಷ್ಟು ಗ್ರಾಮ ಪಂಚಾ ಯಿತಿಗಳನ್ನು ಪುರಸಭೆಗಳಾಗಿ ಪರಿವರ್ತಿಸಲಾಗಿದೆ: (ಜಿಲ್ಲಾವಾರು ವಿವರ ನೀಡುವುದು). | 2020-21, 2021-22 ಮತ್ತು 2022-23 ನೇ ಸಾಲುಗಳಲ್ಲಿ ಬಾಗಲಕೋಟೆ, ವಿಜಯಪುರ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿನ ಯಾವುದೇ ಗ್ರಾಮ ಪಂಚಾಯಿತಿಯನ್ನು ಪುರಸಭೆಯನ್ನಾಗಿ ಪರಿವರ್ತಿಸಿರುವುದಿಲ್ಲ. |
| ಆ | ಗ್ರಾಮ ಪಂಚಾಯಿತಿಗಳನ್ನು ಪುರಸಭೆಗಳನ್ನಾಗಿ ಪರಿವರ್ತಿಸಲು ಬೇಕಾದ ಜನಸಂಖ್ಯೆ ಎಷ್ಟು; ಹಾಗೂ ಇರುವ ಮಾನದಂಡಗಳೇನು: (ವಿವರವಾದ ಮಾಹಿತಿ ನೀಡುವುದು). | ಗ್ರಾಮ ಪಂಚಾಯಿತಿಗಳನ್ನು ಪುರಸಭೆಗಳನ್ನಾಗಿ ಪರಿವರ್ತಿಸಲು ಇರಬೇಕಾದ ಜನಸಂಖ್ಯೆ: ನಿಕಟಪೂರ್ವ ಜನಗಣತಿಯನ್ವಯ ಅಂದರೆ 2011 ರ ಜನಗಣತಿಯನ್ವಯ 20,000 ದಿಂದ 50,000.<br>ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರ ಸೆಕ್ಷನ್-3 ರಲ್ಲಿರುವಂತೆ ಒಂದು ಪ್ರದೇಶವನ್ನು ಪುರಸಭೆಯನ್ನಾಗಿ ಪರಿವರ್ತಿಸಲು ಅನುಸರಿಸುವ <u>ಮಾನದಂಡ:</u><br>1) ಅಂಥ ಪ್ರದೇಶದ ಜನಸಂಖ್ಯೆ ಇಪ್ಪತ್ತು ಸಾವಿರಕ್ಕಿಂತ ಕಡಿಮೆಯಿಲ್ಲದ ಮತ್ತು ಐವತ್ತು ಸಾವಿರಕ್ಕಿಂತ ಹೆಚ್ಚಿಲ್ಲದ ಹೊರತು;<br>2) ಅಂಥ ಪ್ರದೇಶದಲ್ಲಿನ ಜನಸಂಖ್ಯೆಯ ಸಾಂದ್ರತೆಯು ಒಂದು ಚದರ ಕಿಲೋಮೀಟರ್ ಪ್ರದೇಶಕ್ಕೆ ಒಂದು ಸಾವಿರದ ಐದುನೂರು ನಿವಾಸಿಗಳಿಗಿಂತ ಕಡಿಮೆಯಿಲ್ಲದ ಹೊರತು;<br>3) ಹಿಂದಿನ ನಿಕಟಪೂರ್ವ ಜನಗಣತಿಯಲ್ಲಿ ಅಂಥ ಪ್ರದೇಶದಿಂದ ಸ್ಥಳೀಯ ಆಡಳಿತಕ್ಕಾಗಿ ತೆರಿಗೆ ಮತ್ತು ತೆರಿಗೆಯಿಲ್ಲದ ಇತರ ಸಂಪನ್ಮೂಲಗಳಿಂದ ಉತ್ಪಾದಿತವಾದ ರಾಜಸ್ವ ವಾರ್ಷಿಕ ಒಂಭತ್ತು ಲಕ್ಷ ಅಥವಾ ವಾರ್ಷಿಕ ತಲಾ ಒಬ್ಬನಿಗೆ ನಲವತ್ತೈದು ರೂ.ಗಳ ದರದಂತೆ ಲೆಕ್ಕ ಹಾಕಲಾದ ಮೊತ್ತ ಇವೆರಡರಲ್ಲಿ ಯಾವುದು ಹೆಚ್ಚೋ ಆ ಮೊತ್ತಕ್ಕಿಂತ ಕಡಿಮೆಯಿರದ ಹೊರತು;<br>4) ಕೃಷಿಯೇತರ ಚಟುವಟಿಕೆಗಳಲ್ಲಿನ ಉದ್ಯೋಗದ ಶೇಕಡಾವಾರು ಒಟ್ಟು ಉದ್ಯೋಗದ ಶೇಕಡ ಐವತ್ತಕ್ಕಿಂತ ಕಡಿಮೆಯಿಲ್ಲದ ಹೊರತು; |

| | | |
|---|---|---|
| ಇ | ಗ್ರಾಮ ಪಂಚಾಯಿತಿಗಳನ್ನು ಪುರಸಭೆಯನ್ನಾಗಿ ಪರಿವರ್ತಿಸಿದ ಬಳಿಕ ಚುನಾವಣೆ ನಡೆಸಲು ಬೇಕಾಗುವ ಕಾಲಾವಧಿಯೆಷ್ಟು | ಕರ್ನಾಟಕ ಪೌರಸಭೆಗಳ ಅಧಿನಿಯಮ 1964ರ ಸೆಕ್ಷನ್-358 ರನ್ವಯ ಒಂದು ನಗರ ಸ್ಥಳೀಯ ಸಂಸ್ಥೆಯನ್ನು ರೂಪಿಸಿದ ತರುವಾಯ ಸಾಮಾನ್ಯವಾಗಿ 06 ತಿಂಗಳೊಳಗಾಗಿ ಚುನಾವಣೆಗಳನ್ನು ನಡೆಸಲು ಕ್ರಮವಹಿಸಬೇಕಾಗಿದ್ದು, ಅದರಂತೆ ಸಂಬಂಧಪಟ್ಟ ಜಿಲ್ಲಾಧಿಕಾರಿಯವರು ನಿರ್ಧರಿಸುವ ಕ್ಷೇತ್ರ ಪುನರ್ವಿಂಗಡಣೆಗೆ ಅನುಗುಣವಾಗಿ ವಾರ್ಡುವಾರು ಮೀಸಲಾತಿಯನ್ನು ನಿಗದಿಪಡಿಸಿ ಚುನಾವಣೆ ನಡೆಸಲಾಗುತ್ತದೆ. |

**ಸಂಖ್ಯೆ:ನಅಇ 09 ಎಲ್‌ಸಿಕ್ಯೂ 2023.**

(ರಹೀಂ ಖಾನ್)
ಪೌರಾಡಳಿತ ಮತ್ತು ಹಜ್ ಸಚಿವರು